ಅಸಲು ದಾವಾ ಸಂಖ್ಯೆ - 62/2018
ಡಿಡಬ್ಲ್ಯೂ - 01
ದಿನಾಂಕಃ 09.08.2023
ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆ - ಶ್ರೀ ವಿ ಬಿ ಟಿ ವಕೀಲರಿಂದ.**

ಈ ದಾವೆಯಲ್ಲಿ ನಾನು ಪ್ರತಿವಾದಿ ನಂ.1 ಆಗಿದ್ದು ಇಂದು ನಾನು ನನ್ನ ಮೌಖಿಕ ಸಾಕ್ಷ್ಯದ ಬದಲು ಈ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಇದರಲ್ಲಿ ಬರೆದ ಎಲ್ಲ ವಿಷಯ ನಿಜ ಮತ್ತು ಸರಿ ಇದ್ದು ನನಗೆ ಗೊತ್ತಿದೆ.

ನಾನು ಈ ಕೆಳಕಂಡ ದಸ್ತಾವೇಜುಗಳನ್ನು ಹಾಜರು ಪಡಿಸಿದ್ದೇನೆ.

ಹತ್ತಿಮತ್ತೂರು ಗ್ರಾಮದ ಸರ್ವೆ ನಂ.441/1, 441/5 ಇವುಗಳ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ-1 ಮತ್ತು 2 ಎಂದು ಗುರುತಿಸಲಾಯಿತು.

ಗ್ರಾಮ ಲೆಕ್ಕಾದಿಕಾರಿ ಹತ್ತಿಮತ್ತೂರು ಇವರಿಗೆ ನೀಡಿರುವ ಎರಡು ಅರ್ಜಿಗಳ ದೃಡಿಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಡಿ-3 ಮತ್ತು 4 ಎಂದು ಗುರುತಿಸಲಾಯಿತು.

ನೋಟಿಸಿನ ದೃಡಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ-5 ಎಂದು ಗುರುತಿಸಲಾಯಿತು.

ಎಂ ಆರ್ ನಂ.ಹೆಚ್ -75 ರ ದೃಡಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ-6 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯನ್ನು ವಜಾ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ, ನೀಡಲಾಯಿತು.**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು.ಸವಣೂರು